# ಕನ್ನಡ ಪೋಸ್ಟ್

ಇದು ಸುದ್ದಿ ವಿಲಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 135 | Pages. 2 | Date: 29-03-2025, SATURDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 135 - ಪುಟಗಳು : 2 - 29 ಮಾರ್ಚ್ 2025 ಶನಿವಾರ Ph: 8762954248 ದರ : ₹1


# ಮಾದಕ ವಸ್ತು ಸಾಗಾಟ-ಮಾರಾಟ ನಿಲ್ಲಿಸಿ

## ಅಧಿಕಾರಿಗಳಿಗೆ ಡಿಸಿ ಸತ್ಯಭಾಮ ಸೂಚನೆ | ಹೆಚ್ಚು ಪ್ರಕರಣ ದಾಖಲಿಸಲು ನಿರ್ದೇಶನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಮಾದಕ ವಸ್ತುಗಳ ಉತ್ಪಾದನೆ, ಸಾಗಾಣಿಕೆ, ಮಾರಾಟ ಹಾಗೂ ಬಳಕೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ನಾರ್ಕೋ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಯಾರು ಓಡಾಡದೇ ಇರುವಂತಹ ಪ್ರದೇಶದಲ್ಲಿ ಗಾಂಜಾ ಬೆಳೆಯುವ ಸಾಧ್ಯತೆ ಇರುತ್ತದೆ, ಈ ನಿಟ್ಟಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಗಸ್ತು ಸಮಯದಲ್ಲಿ ಗಮನಹರಿಸಿ ಗಾಂಜಾ ಬೆಳೆಯನ್ನು ಪತ್ತೆಹಚ್ಚಿ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು.



ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಹ ಎಚ್ಚರಿಕೆ ವಹಿಸಿ ತೋಟಗಾರಿಕೆ ಮತ್ತು ಕೃಷಿ ಜಮೀನುಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಗಾಂಜಾ ಬೆಳೆ ಪತ್ತೆ ಹಚ್ಚಬೇಕು. ಅಕ್ರಮವಾಗಿ ಔಷಧಿ ಅಂಗಡಿಗಳಲ್ಲಿ ಒಂದೇ ರೀತಿಯಾಗಿರುವ ಹೆಚ್ಚಿನ ಡ್ರಗ್ ಮಾರಾಟವಾಗುತ್ತಿದ್ದರೆ ಅಂತಹ ಅಂಗಡಿಗಳ ಮೇಲೆ ಸೂಕ್ತ ನಿಗಾವಹಿಸಿ ಅನಿರೀಕ್ಷಿತ ದಾಳಿ ನಡೆಸಬೇಕು.

ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಮಾದಕ ವಸ್ತುಗಳ ಸೇವನೆ ಪತ್ತೆ ಹಚ್ಚಲು ಉಪಕರಣ ಲಭ್ಯವಿರುವಂತೆ ನೋಡಿಕೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅವರಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ರೆಸಾರ್ಟ್ ಮತ್ತು ಹೋಂ ಸ್ಟೇಗಳಿಗೆ ವಾರಾಂತ್ಯದಲ್ಲಿ ಯಾತ್ರಿಕರು ಬಂದು ಹೋಗುತ್ತಿದ್ದು, ಕೆಲವು ರೆಸಾರ್ಟ್ ಮತ್ತು ಹೋಂ ಸ್ಟೇಗಳು ಹೆಚ್ಚು ಭರ್ತಿಯಾಗುತ್ತಿವೆ.

ಯಾತ್ರಿಕರಿಗೆ ಸೇವನೆ ಮಾಡಲು ಅಕ್ರಮವಾಗಿ ಮಾದಕ ವಸ್ತುಗಳನ್ನು ಪೂರೈಕೆ ಮಾಡುವ ಮಾಹಿತಿ ಇದೆ. ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಎಂದರಲ್ಲದೆ, ರಾತ್ರಿ ವೇಳೆ ಅನಿರೀಕ್ಷಿತ ಭೇಟಿ ನೀಡಿ ತಕ್ಷಣ ಪೊಲೀಸ್ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದು ಪ್ರಕರಣ ದಾಖಲಿಸುವಂತೆ ಸೂಚಿಸಿದರು.

ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಹಿಂದಿನ ಸಭೆಯಲ್ಲಿ 50 ಪ್ರಕರಣ ದಾಖಲಿಸಲು ಗುರಿ ನಿಗದಿಪಡಿಸಲಾಗಿತ್ತು, ಇನ್ನೂ ಹೆಚ್ಚಿನ ಕಾಳಜಿಯಿಂದ ಪತ್ತೆ ಹಚ್ಚಬೇಕು. ಮಾದಕ ವಸ್ತುಗಳ ಪತ್ತೆಗಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕೂಡ ವಾಹನಗಳ ತಪಾಸಣೆ ಮಾಡಿ ಜಿಪಿಎಸ್ ಫೋಟೋ ನೀಡಲು ಸೂಚಿಸಿದರು.

ಮುಖ್ಯವಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಿದರಲ್ಲದೆ, ಶಾಲಾ ಕಾಲೇಜು ಸುತ್ತಮುತ್ತ ಮಾದಕ ವಸ್ತುಗಳ ಮಾರಾಟ ಮಾಡುವುದನ್ನು ಪತ್ತೆಹಚ್ಚಲು ಹೆಚ್ಚಿನ ನಿಗಾವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆ, ಬಿಸಿಎಂ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳಲ್ಲಿಯೂ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ಮಾಡುವುದರ ಜೊತೆಗೆ ಮಕ್ಕಳಿಗೆ ಅರಿವು ಮೂಡಿಸಲು ಸೂಚಿಸಿದರು. ವಾರ್ಡನ್‌ಗಳು ಮಕ್ಕಳ ಮೇಲೆ ಹೆಚ್ಚಿನ ನಿಗಾವಹಿಸಲು ಸೂಚನೆ ನೀಡಿದರು.

ಮಾದಕ ವಸ್ತುಗಳ ಸೇವನೆ ಹೆಚ್ಚಾಗಿದೆ ಅದನ್ನು ತಡೆಗಟ್ಟಲು ಎಲ್ಲರೂ ಜಾಗೃತರಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ಮಾದಕ ವಸ್ತುಗಳ ಸಾಗಣಿಕೆ ಪತ್ತೆಗಾಗಿ ಪೊಲೀಸ್ ಇಲಾಖೆಯೊಂದಿಗೆ ರೈಲ್ವೆ ಇಲಾಖೆ ಪೊಲೀಸ್ ಸಿಬ್ಬಂದಿ ಕೂಡ ಕೈ ಜೋಡಿಸಬೇಕು. ಶಾಲಾ ಕಾಲೇಜು ಹಾಗೂ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವುದು ಬಹುಮುಖ್ಯವಾಗಿದೆ ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ವೆಂಕಟೇಶ್ ನಾಯ್ಡು ಹಾಗೂ ಇತರರಿದ್ದರು.

# ನೌಕರರಿಗೆ ರಕ್ಷಣೆ ಇಲ್ಲ: ಸೂರಜ್ ಆರೋಪ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಚನ್ನರಾಯಪಟ್ಟಣ ತಾಲ್ಲೂಕು ಸಾತೇನಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೇಲೆ ಗ್ರಾಪಂ ಸದಸ್ಯ ಮಾರಣಾಂತಿಕ ಹಲ್ಲೆ ನಡೆಸಿದ್ದರೂ ಎಫ್‌ಐಆರ್ ದಾಖಲಿಸಲು ಪೊಲೀಸರು ಹಿಂದೇಟು ಹಾಕಿದ್ದಾರೆ. ಹೀಗಾದರೆ ಸರ್ಕಾರಿ ನೌಕರರನ್ನು ಕಾಪಾಡುವವರು ಯಾರು ಎಂದು ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಮಾ. 25 ರಂದು ಪಿಡಿಓ ಅರುಣ್‌ಕುಮಾರ್ ಮೇಲೆ ಯೋಗೇಶ್ ಎಂಬಾತ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ. ಆತನ ವಿರುದ್ಧ ಎಫ್‌ಐಆರ್ ದಾಖಲಿಸಲು ಪೊಲೀಸರು ವಿಳಂಬ ಮಾಡಿದರು. ಜನಪ್ರತಿನಿಧಿಯಾಗಿ ನಾನು ಧ್ವನಿ ಎತ್ತಿದ ಬಳಿಕ ಎಫ್‌ಐಆರ್ ದಾಖಲಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿದ್ದಾರೆ. ಯೋಗೇಶ್ ವಿರುದ್ಧ ಕ್ರಮ ಜರುಗಿಸಿದಂತೆ ವಿಧಾನ ಪರಿಷತ್ ಮಾಜಿ ಸದಸ್ಯ ಪ್ರಯತ್ನಿಸಿದ್ದಾರೆ. ಜಿಲ್ಲೆಯ ಹೆಸರಿಗೆ ಕಳಂಕ ತರುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದರು.

ಹೊಳೆನರಸೀಪುರ ತಾಲ್ಲೂಕು ಪಡುವಲಹಿಪ್ಪೆ, ಹಳೇಕೋಟೆ, ಕಟ್ಟೆಬೆಳಗುಲಿ ಗ್ರಾ.ಪಂ. ವ್ಯಾಪ್ತಿಯಲ್ಲಿ ಒಂದೇ ಒಂದು ಗ್ರಾಮ ಸಭೆ ನಡೆಸದೆ ಡಿಪಿಆರ್‌ಗೆ ಅನುಮೋದನೆ ಪಡೆದಿದ್ದಾರೆ. ಜಿ.ಪಂ. ಮುಖ್ಯಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಅವರೇ ಬಿಲ್ ಮಾಡಿಕೊಂಡಿದ್ದಾರೆ. ಈ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೇ ಹೇಳಿಕೊಂಡಿದ್ದಾರೆ ಎಂದರು. ಜಿಲ್ಲಾ ಪಂಚಾಯಿತಿಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆಯುತ್ತಿದ್ದು ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಅವರನ್ನು ಕೂಡಲೇ ಅಮಾನತುಗೊಳಿಸಬೇಕು ಎಂದು ಒತ್ತಾಯಿಸಿದರು.

ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ 2025-26ನೇ ಸಾಲಿನ ಹೆಚ್ಚುವರಿ ಕ್ರಿಯಾ ಯೋಜನೆ ಅನುಮೋದನೆಗಾಗಿ ಗ್ರಾಮ ಪಂಚಾಯಿತಿ ಸದಸ್ಯರಿಂದ ಶೇ. 2 ರಷ್ಟು ಕಮಿಷನ್ ಪಡೆಯಲಾಗುತ್ತಿದೆ. ಅರಸೀಕೆರೆ ತಾಲ್ಲೂಕು ಪುರ್ಲೆಹಳ್ಳಿ ಪಂಚಾಯಿತಿ ಸದಸ್ಯರಿಂದ ಮಾಹಿತಿ ಬೆಳಕಿಗೆ ಬಂದಿದೆ ಎಂದರು.

## 600 ವಿದ್ಯಾರ್ಥಿಗಳಿಂದ ರಕ್ತದಾನ | ರೋಟರಿ, ರೆಡ್ ಕ್ರಾಸ್ ಸಹಯೋಗ

# ಮಹಿಳಾ ಸರ್ಕಾರಿ ಕಾಲೇಜಿನಲ್ಲಿ ರಕ್ತದಾನ ಶಿಬಿರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಆರೋಗ್ಯ ತಪಾಸಣೆ ಮತ್ತು ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಕಾಲೇಜಿನ ಯುವ ರೆಡ್ ಕ್ರಾಸ್ ಘಟಕ, ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ಧರ್ಮಸ್ಥಳ ಆಯುರ್ವೇದ ಆಸ್ಪತ್ರೆ, ಅಮ್ಮ ಕಣ್ಣಿನ ಆಸ್ಪತ್ರೆ, ಹಾಸನಾಂಬ ದಂತ ವೈದ್ಯಕೀಯ ಕಾಲೇಜು, ಥೈರೋಕೇರ್ ಹಾಸನ ಹಾಗೂ ಜೀವಾ ರಕ್ಷಾ ರಕ್ತ ನಿಧಿ ವತಿಯಿಂದ ದಂತ ತಪಾಸಣೆ, ಥೈರಾಯ್ಡ್ ತಪಾಸಣೆ, ನೇತ್ರ ತಪಾಸಣೆ, ರಕ್ತದ ಗುಂಪು ಪತ್ತೆ ಹಾಗೂ ಔಷಧ ವಿತರಣೆ ನಡೆಸಲಾಯಿತು. ಕಾಲೇಜಿನ 600ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆರೋಗ್ಯ ತಪಾಸಣೆ ಶಿಬಿರದ ಸದುಪಯೋಗ ಪಡೆದುಕೊಂಡರು.



ಅಮ್ಮ ಕಣ್ಣಿನ ಆಸ್ಪತ್ರೆಯ ಸಂಸ್ಥಾಪಕ ಡಾ. ಸಂದೀಪ್ ಮಾತನಾಡಿ, ಕಣ್ಣು ಮೆದುಳಿನ ಒಂದು ಭಾಗ. ವಯೋಸಹಜವಾಗಿ ಕಣ್ಣಿನ ಪೊರೆ ಪ್ರಾಣಿ, ಪಕ್ಷಿಗಳು ಸೇರಿದಂತೆ ಮನುಷ್ಯರಿಗು ಬರುತ್ತದೆ. ವೈಜ್ಞಾನಿಕ ದೃಷ್ಟಿಕೋನದತ್ತ ಆಲೋಚಿಸಿ ಮಾನವ ತನ್ನ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳಬೇಕು. ಪ್ರತಿಯೊಬ್ಬ ವ್ಯಕ್ತಿಯೂ ಸೇವಾ ಮನೋಭಾವನೆ ಹೊಂದಬೇಕು. ಬಡವರಿಗೆ ಆರೋಗ್ಯ ತಪಾಸಣೆ ಮಾಡಿಸುವುದು ಪುಣ್ಯದ ಕೆಲಸವು ಹೌದು ಎಂದರು.

ಜೀವ ರಕ್ಷಕ ರಕ್ತ ನಿಧಿ ಸಂಸ್ಥೆಯ ಮೋಹನ್ ಮಾತನಾಡಿ, ರಕ್ತದಾನ ಎಂಬುದು ಒಂದು ಸರಳ ಪ್ರಕ್ರಿಯೆ. ರಕ್ತದಾನ ಮಾಡುವುದರಿಂದ ರಕ್ತದೊತ್ತಡ ಹಾಗೂ ಶೇ. 80 ಹೃದಯಾಘಾತ ಆಗುವುದಿಲ್ಲ. ಒಬ್ಬ ಮನುಷ್ಯ 40 ಬಾರಿ ರಕ್ತದಾನ ಮಾಡಿದರೆ ಕರ್ನಾಟಕ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸುತ್ತದೆ. ಆರೋಗ್ಯಯುತ ವ್ಯಕ್ತಿಗಳು 18 ವರ್ಷದಿಂದ ಮೇಲ್ಪಟ್ಟ, 45 ಕೆ.ಜಿ.ಗಿಂತ ಹೆಚ್ಚು ತೂಕ ಹೊಂದಿರುವವರು ರಕ್ತದಾನ ಮಾಡಬಹುದು. ರಕ್ತದಾನ ಮಾಡುವ ಮೂಲಕ ಇನ್ನೊಂದು ಜೀವವನ್ನು ಉಳಿಸಿ ಎಂದು ಸಲಹಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಮಾನವ ದೇಹದಲ್ಲಿ ಹಲವು ಸಮಸ್ಯೆಗಳಿದ್ದರೂ, ಅವು ನಮ್ಮ ಅರಿವಿಗೆ ಬರುವುದಿಲ್ಲ. ಆರೋಗ್ಯದ ವಿಚಾರವಾಗಿ ಅಸಡ್ಡೆ ಬೇಡ ಜಾಗೃತರಾಗಿರಿ. ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳು ತಮ್ಮಲ್ಲಿರುವ ಸಮಸ್ಯೆಗಳಿಗೆ ವೈದ್ಯರಲ್ಲಿ ಮುಕ್ತವಾಗಿ ಚಿಕಿತ್ಸೆ ಪಡೆದು ಆರೋಗ್ಯ ತಪಾಸಣಾ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಕಾಲೇಜಿನ ಸುಮಾರು 25ಕ್ಕೂ ಅಧಿಕ ಯುವತಿಯರು ಹಾಗೂ ಅಧ್ಯಾಪಕರು ರಕ್ತದಾನ ಮಾಡಿದರು. ಇದಲ್ಲದೇ 600ಕ್ಕೂ ಅಧಿಕ ವಿದ್ಯಾರ್ಥಿನಿಯರು ವಿವಿಧ ತಪಾಸಣೆ ಮಾಡಿಸಿಕೊಂಡರು.

ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ ಅಧ್ಯಕ್ಷ ಯು.ವಿ. ಸಚಿನ್, ಕಾರ್ಯದರ್ಶಿ ಪುನೀತ್, ಖಜಾಂಚಿ ಪಿ. ರವಿಕುಮಾರ್, ಸದಸ್ಯರಾದ ಎಸ್. ಯೋಗೇಶ್, ಹೆಚ್.ಕೆ. ದಿಲೀಪ್ ಕುಮಾರ್, ಆರ್. ಯೋಗೇಶ್, ಕಾಲೇಜಿನ ಯುವ ರೆಡ್ ಕ್ರಾಸ್ ಘಟಕದ ಸಂಚಾಲಕ ಡಾ. ಸಿ.ಎಲ್. ಶಿವಕುಮಾರ್ ಇತರರಿದ್ದರು.

# ಸಾರ್ವಜನಿಕರು ಕಚೇರಿಗೆ ಅಲೆಯುವಂತೆ ಮಾಡಬೇಡಿ

## ಕೆಡಿಪಿ ಸಭೆಯಲ್ಲಿ ಶಾಸಕ ಸ್ವರೂಪ್ : ಕಾಳತಮ್ಮನಹಳ್ಳಿ ಗ್ರಾಮಸ್ಥರಿಗೆ ಹಕ್ಕುಪತ್ರ ವಿತರಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಶಾಸಕ ಹೆಚ್.ಪಿ. ಸ್ವರೂಪ್ ಅಧ್ಯಕ್ಷತೆಯಲ್ಲಿ ಶುಕ್ರವಾರ ತ್ರೈಮಾಸಿಕ ಕೆಡಿಪಿ ಸಭೆ ನಡೆಯಿತು.

ಇಲಾಖಾವಾರು ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕರು, ಸರ್ಕಾರದ ಯೋಜನೆಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು ಎಂದು ಸಲಹೆ ನೀಡಿದರು.

ಸಾರ್ವಜನಿಕರು ಹಾಗೂ ರೈತರಿಗೆ ತೊಂದರೆಯಾಗದಂತೆ ಕೆಲಸ ನಿರ್ವಹಿಸಬೇಕು.

ಸರ್ಕಾರಿ ಕಚೇರಿಗಳಲ್ಲಿ ಜನಸಾಮಾನ್ಯರನ್ನು ಹೆಚ್ಚು ಕಾಯಿಸಬಾರದು, ತಡ ಮಾಡದಂತೆ ಕೆಲಸ ಮಾಡಿಕೊಡಿ, ಸೌಮತ್ಯೆಯಿಂದ ನಡೆದುಕೊಂಡು ಕೆಲಸ ಮಾಡುವಂತೆ ಹೇಳಿದರು.

ಬೈಲಹಳ್ಳಿ ಹೋಬಳಿ ಕಾಳತಮ್ಮನಹಳ್ಳಿ ಗ್ರಾಮದ 68 ಕುಟುಂಬಗಳಿಗೆ ಹಕ್ಕುಪತ್ರ ನೀಡದೆ ಸತಾಯಿಸಲಾಗುತ್ತಿದೆ. 20 ವರ್ಷಗಳಿಂದ ನಿವಾಸಿಗಳು ಸ್ವಂತ ಸೂರಿಲ್ಲದೆ ಪರದಾಡುತ್ತಿದ್ದಾರೆ. ಅಧಿಕಾರಿಗಳು ಇಂತಹ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.



ಹಕ್ಕುಪತ್ರ ನೀಡಿದ್ದೇವೆ ಎಂದು ಅಧಿಕಾರಿಗಳು ಹೇಳುತ್ತಾರೆ. ಗ್ರಾಮಸ್ಥರು ತಮಗೆ ಯಾವ ಹಕ್ಕುಪತ್ರ ತಲುಪಿಲ್ಲ ಎನ್ನುತ್ತಾರೆ.

ಹೀಗಾದರೆ ಲೋಪ ಯಾರಿಂದ ಆಗಿದೆ ಎಂಬುದು ಗೊತ್ತಾಗಬೇಕು ಎಂದು ಅಧಿಕಾರಿಯಿಂದ ಮಾಹಿತಿ ಪಡೆದರು. ಮಂಗಳವಾರ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲಾಗುವುದು ಎಂದು ಭರವಸೆ ನೀಡಿದರು.

ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜ್ಯೋತಿಲಕ್ಷ್ಮಿ ಮಾತನಾಡಿ, ಅಂಗನವಾಡಿಗಳಲ್ಲಿ ಸಿಬ್ಬಂದಿ ಕೊರತೆ ಮಿತಿ ಮೀರಿದೆ. ತಾಲ್ಲೂಕಿನಲ್ಲಿ 434 ಅಂಗನವಾಡಿ ಕೇಂದ್ರಗಳಿವೆ.

25 ಮಂಜೂರಾತಿ ಹುದ್ದೆಗಳಿದ್ದು, 14 ಸ್ಥಾನ ಖಾಲಿ ಇವೆ. 10 ಮೇಲ್ವಿಚಾರಕ ಹುದ್ದೆಗಳು ಭರ್ತಿಯಾಗಬೇಕು. ಕಡಿಮೆ ಸಿಬ್ಬಂದಿ ಕಾರಣಕ್ಕೆ ಕೆಲಸ ಮಾಡಲು ಆಗುತ್ತಿಲ್ಲ ಎಂದರು. 175 ಅಂಗನವಾಡಿಗಳಿಗೆ ಎಲ್‌ಇಡಿ ಟಿವಿ ತಲುಪಿವೆ. ಕ್ಷೀರ ಭಾಗ್ಯ ಯೋಜನೆಯಡಿ 1.80 ಕೋಟಿ ರೂ. ಅನುದಾನ ಬಿಡುಗಡೆಯಾಗಬೇಕು. ಪೂರಕ ಪೌಷ್ಟಿಕ ಆಹಾರ ವಿತರಣೆ ಸುಗಮವಾಗಿ ನಡೆಯುತ್ತಿದೆ ಎಂದರು.

ತಾಲ್ಲೂಕಿನಲ್ಲಿ 97,345 ಗೃಹಲಕ್ಷ್ಮಿ ಫಲಾನುಭವಿಗಳಿದ್ದಾರೆ. 9 ಸಾವಿರ ಅರ್ಜಿಗಳು ಪೆಂಡಿಂಗ್ ಇವೆ. ಅದರಲ್ಲಿ 2885 ಅರ್ಜಿದಾರರು ಜಿಎಸ್‌ಟಿ ತೆರಿಗೆದಾರರಿದ್ದಾರೆ. 1025 ವಲಸೆ ಹೋಗಿದ್ದಾರೆ.

1500 ಮಹಿಳೆಯರು ಮರಣ ಹೊಂದಿದ್ದಾರೆ ಎಂದು ಮಾಹಿತಿ ನೀಡಿದರು.

ಭಾಗ್ಯಲಕ್ಷ್ಮಿ ಯೋಜನೆ ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಯಿತು. 2025-26ನೇ ಸಾಲಿನ ಕ್ರಿಯಾಯೋಜನೆ ಪುಸ್ತಕ ಬಿಡುಗಡೆ ಮಾಡಲಾಯಿತು.

ತಾಲ್ಲೂಕು ಪಂಚಾಯಿತಿ ನಾಮ ನಿರ್ದೇಶಿತ ಸದಸ್ಯರಾದ ರಂಗಮ್ಮ, ಮಂಜೇಗೌಡ, ರಕ್ಷಿತ್‌ಗೌಡ, ಕರಿಗೌಡ, ಆಡಳಿತಾಧಿಕಾರಿ ಗಿರೀಶ್, ಜಿಲ್ಲಾಧಿಕಾರಿ ಕಚೇರಿ ತಹಶೀಲ್ದಾರ್ ಮೋಹನ್ ಇತರರಿದ್ದರು.

# ಸಾರ್ವಜನಿಕ ರಸ್ತೆಗೆ ಗೇಟ್ ತೆರವಿಗೆ ಆಗ್ರಹಿಸಿ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸಾರ್ವಜನಿಕರು ಸಂಚರಿಸುವ ದಾರಿಗೆ ಅಕ್ರಮವಾಗಿ ಗೇಟ್ ಅಳವಡಿಸಿರುವ ವ್ಯಕ್ತಿಯ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಕಾಫಿ ಬೆಳೆಗಾರರ ಸಂಘಟನೆ, ಮಲೆನಾಡು ಮೂಲ ನಿವಾಸಿಗಳ ಒಕ್ಕೂಟದಿಂದ ಶುಕ್ರವಾರ ಮಿನಿ ವಿಧಾನಸೌಧ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಹಾನುಬಾಳ್ ಹೋಬಳಿ ಹೆಗದ್ದೆ ಗ್ರಾಮದ ಸರ್ವೆ ನಂ. 340ರಲ್ಲಿ ಭೂಮಿ ಖರೀದಿಸಿರುವ ಬೆಂಗಳೂರು ಮೂಲದ ಅಜಯ್ ರೆಡ್ಡಿ ಎಂಬಾತ ನೂರಾರು ವರ್ಷಗಳು ಸಾರ್ವಜನಿಕರು ಹಾಗೂ ರೈಲ್ವೆ ಇಲಾಖೆ ವಾಹನಗಳು ಸಂಚರಿಸುತ್ತಿದ್ದ ರಸ್ತೆಗೆ ಗೇಟ್ ಅಳವಡಿಸಿ ತೊಂದರೆ ನೀಡುತ್ತಿದ್ದಾರೆ. ಈ ರಸ್ತೆಯನ್ನು ರೈಲ್ವೆ ಇಲಾಖೆ ಅಭಿವೃದ್ಧಿಗೊಳಿಸಿದ್ದರೆ, ಹೆಗದ್ದೆ ಗ್ರಾ.ಪಂ.ನಿಂದ ಜಲ್ಲಿ ಹಾಕಲಾಗಿದೆ. ಅಲ್ಲದೆ ಗ್ರಾಮಸ್ಥರು ತಮ್ಮ ಕುಲದೇವರಿಗೆ ಹೋಗಲು ಇದೇ ರಸ್ತೆ ಅವಲಂಬಿಸಿದ್ದಾರೆ. ಸರ್ವೆ ನಂ. 340ರಲ್ಲಿ ಇನ್ನೂ ಹಲವರ ಭೂಮಿ ಇದ್ದು ಇಂದಿಗೂ ಪೋಡಿ ಮಾಡಿಲ್ಲ. ಆದರೂ ಈ ವ್ಯಕ್ತಿ ಜಮೀನಿನ ಆರಂಭದಲ್ಲಿ ಗೇಟ್ ಅಳವಡಿಸಿ ತೊಂದರೆ ನೀಡುತ್ತಿದ್ದಾನೆ. ಈ ಬಗ್ಗೆ ಗ್ರಾಮದ ಅಶೋಕ ಎಂಬುವವರು ನ್ಯಾಯಾಲಯದ ಮೊರೆ ಹೋಗಿ ತಡೆಯಾಜ್ಞೆ ತಂದಿದ್ದರು ಎಂದರು.

ನ್ಯಾಯಾಂಗ ನಿಂದನೆ ಅಡಿ ಐವರ ವಿರುದ್ಧ ದೂರು ದಾಖಲಾಗಿದೆ. ಆದರೂ ಗೇಟ್ ತೆರವುಗೊಳಿಸದೆ ದರ್ಪ ತೋರಲಾಗುತ್ತಿದೆ. ಆದ್ದರಿಂದ ಕಂದಾಯ ಇಲಾಖೆ ಅಧಿಕಾರಿಗಳು ಈ ಕೂಡಲೇ ಗೇಟ್ ತೆರವುಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು ಹಾಗೂ ಸಾರ್ವಜನಿಕರ ಸಂಚಾರಕ್ಕೆ ಧಕ್ಕೆ ತಂದಿರುವ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕಾಫಿ ಬೆಳೆಗಾರರ ಸಂಘಟನೆಯ ಹೆತ್ತೂರು ದೇವರಾಜ್, ಬೆಕ್ಕನಹಳ್ಳಿ ನಾಗರಾಜ್, ಕೃಷ್ಣಪ್ಪ, ಮಾಸವಳ್ಳಿ ಚಂದ್ರು, ಲೋಹಿತ್ ಕೌಡಳ್ಳಿ, ಸುರೇಂದ್ರ, ನರೇಶ್, ಕಟ್ಟೆಗದ್ದೆ ನಾಗರಾಜ್ ಮಹೇಶ್, ಶ್ರೀನಿಧಿ ಇತರರಿದ್ದರು.

## ಸರ್ಕಾರಿ ಶಾಲೆಗೆ ಡೆಸ್ಕ್ ಕೊಡುಗೆ

ಹಾಸನ: ಆಲೂರಿನ ಕಾಫಿ ಬೆಳೆಗಾರ ಕೆ. ತನುಗೌಡ ಅವರು ಸರ್ಕಾರಿ ಶಾಲೆಗಳ ಅನುಕೂಲಕ್ಕಾಗಿ 20 ಡೆಸ್ಕ್‌ಗಳನ್ನು ಜಿಲ್ಲಾಡಳಿತ ಮೂಲಕ ಕೊಡುಗೆಯಾಗಿ ನೀಡಿದರು.

ಕಾಫಿ ಮತ್ತು ಮೆಣಸು ವ್ಯಾಪಾರಸ್ಥ ಆಲೂರಿನ ಕೆ. ತನುಗೌಡ ಅವರು ಬಂದೂಕು ಪರವಾನಗಿ ಪಡೆಯಲು ಜಿಲ್ಲಾಧಿಕಾರಿ ಕಚೇರಿಗೆ ಬಂದಾಗ ಸರ್ಕಾರಿ ಶಾಲೆಗೆ ತಮ್ಮಿಂದ ದೇಣಿಗೆ ರೂಪದಲ್ಲಿ ಬೆಂಚ್ ಮತ್ತು ಡೆಸ್ಕ್ ನೀಡುವಂತೆ ಕೋರಿದ್ದರು.

# ಪರಿಸರ ಸಂರಕ್ಷಣೆ ಎಲ್ಲರ ಹೊಣೆ: ಕೆ. ಬಾಷ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಭೂಮಿಯನ್ನು ಸಂರಕ್ಷಿಸುವ ಹೊಣೆ ನಮ್ಮೆಲ್ಲರದಾಗಬೇಕು ಹಾಗೂ ಎಲ್ಲಾ ಜೀವಿಗಳಿಗೂ ಬದುಕುವ ಅವಕಾಶ ಕಲ್ಪಿಸಿಕೊಡಬೇಕು ಎಂದು ಎಂಜಿ ರಸ್ತೆ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಕೆ. ಬಾಷ ತಿಳಿಸಿದರು.

ನಗರದ ಗಂಧದಕೋಠಿ ಆವರಣದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮಾಜಶಾಸ್ತ್ರ ವಿಭಾಗ ಮತ್ತು ಐ.ಕ್ಯೂ.ಎ.ಸಿ ಘಟಕದ ವತಿಯಿಂದ ಗುರುವಾರ ನಡೆದ ಸಾಮಾಜಿಕ ವ್ಯವಹಾರ ಮತ್ತು ಸೂಕ್ಷ್ಮ ಹಣಕಾಸು ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಉಪನ್ಯಾಸ ನೀಡಿದರು.

ಭೌತಿಕ ಸಂಪತ್ತು ಅನ್ನುವುದು 300 ವರ್ಷಗಳಿಂದ ಇದೆ. ಆದರೆ ನಿರ್ಗತಿಕರಿಗೆ ಸಿಗಬೇಕಾದ ಸೌಲಭ್ಯ ಸಿಗುತ್ತಿಲ್ಲ.



ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆ ಅನ್ನುವುದು ವ್ಯಾಪಾರವಾಗಿ ಬೇಳೆಯುತ್ತಿರುವುದನ್ನು ಕಾಣಬಹುದಾಗಿದೆ. ಹಲವಾರು ದೇಶಗಳಲ್ಲಿ ಮಹಿಳೆ ಮತ್ತು ಮಕ್ಕಳಿಗೆ ಸೇವೆಗಳನ್ನು ಉಚಿತವಾಗಿ ಮಾಡಿಕೊಡಲಾಗುತ್ತಿದೆ.

ನಮ್ಮ ದೇಶದಲ್ಲಿ ಇದರ ಬಗ್ಗೆ ಹೆಚ್ಚು ಗಮನ ವಹಿಸಿ ಬಡವರಿಗೆ ಅನುಕೂಲವಾಗುವಂತೆ ಮಾಡಿಕೊಡಬೇಕು. ವಿದ್ಯಾರ್ಥಿಗಳಿಗೆ ವ್ಯಾಪಾರ ಮತ್ತು ಸೂಕ್ಷ್ಮ ಅರ್ಥಶಾಸ್ತ್ರದ ಪರಿಕಲ್ಪನೆಯು ಸಮಾಜ ಶಾಸ್ತ್ರದಲ್ಲಿ ಹೇಗೆ ಬೆಳಕಾಗುತ್ತದೆ ಮತ್ತು ಮನುಷ್ಯನಿಗೆ ಹಣ ಮಾಡುವುದರ ಬಗ್ಗೆ ಆಯಾಮ ಇರುವುದಿಲ್ಲ. ಇದರಿಂದ ದುರಾಸೆ ಎಂಬುದು ಹೆಚ್ಚಾಗಿ ದೇಶ ಹಾಳಗುವಂತಾಗಿದೆ.

ನಮ್ಮ ದೇಶದಲ್ಲಿ ಶೇ.33 ರಷ್ಟು ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಿದ್ದಾರೆ. ವಿದೇಶಿಗಳಲ್ಲಿ ಸೋಶಿಯಲ್ ಬಿಸ್ನೆಸ್‌ನ ಬಗ್ಗೆ ಹಲವಾರು ರೀತಿಯ ಪ್ರಯೋಗಕ್ಕೆ ಮುಂದಾಗಿವೆ.

ನಮ್ಮ ದೇಶದಲ್ಲಿ ಈ ಪರಿಕಲ್ಪನೆ ಆಧಾರವಾಗಿ ಸಮಾಜಕ್ಕೆ ಅನುಕೂಲವಾಗುವಂತೆ ಕೆಲಸಗಳನ್ನು ಮಾಡಲು ಮುಂದಾಗಬೇಕು. ವಿದ್ಯಾರ್ಥಿಗಳು ಬ್ಯಾಂಕ್‌ಗಳು ಹಾಗೂ ಅವುಗಳ ಕಾರ್ಯದ ಬಗ್ಗೆ ಅಪಾರ ಮಾಹಿತಿ ತಿಳಿದುಕೊಂಡಿರಬೇಕು. ಯಾವುದೇ ಕೆಲಸ ಮಾಡಲು ಕೌಶಲ್ಯಗಳನ್ನು ಅರಿತಿರಬೇಕು. ಸ್ವತಃ ದುಡಿಯುವ ಮನಸ್ಥಿತಿ ಎಲ್ಲವನ್ನು ನಿಭಾಯಿಸುತ್ತೆನೆಂಬ ಧ್ಯೇಯ ಹೆಣ್ಣು ಮಕ್ಕಳಿಗೆ ಬಲವಾಗಿರಬೇಕು. ಸಮಸ್ಯೆಗಳೊಂದಿಗೆ ಸಂಧಾನ ಮಾಡಿಕೊಳ್ಳಬಾರದು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಸಾಮಾಜಿಕ ವ್ಯವಹಾರ ಮತ್ತು ಸೂಕ್ಷ್ಮ ಹಣಕಾಸು ವಿಚಾರ ಎಂಬುದು ವಿಶಾಲವಾದ ಅಧ್ಯಯನವಾಗಿದೆ. ಮಾನವ ಸಂಘಜೀವಿಯಾಗಿದ್ದರೂ ಸಹ ಕೂಡಿ ಬಾಳುವ ಮನೋಭಾವನೆ ಇಲ್ಲ. ಸಾಮಾಜಿಕ ಬದ್ಧತೆ ಇರುವ ಕೆಲವರು ಸಮಾಜದಲ್ಲಿ ನಿಸ್ವಾರ್ಥ ಸೇವೆ ಮಾಡಬೇಕು.

ಆರ್ಥಿಕ ಸಮಸ್ಯೆಯಿಂದ ಪಾರಾಗಲೂ ಜನರು ಹಣ ತೆಗೆದು ಬೇರೆ ಕಡೆ ಬಂಡವಾಳ ಹೂಡುತ್ತಾರೆ. ಇದರಿಂದ ಸಾಲ ತೀರಿಸಲಾಗದೆ ಸಾಲಗಾರ ನಾಗುತ್ತಾನೆ. ಸಾಮಾಜಿಕ ವ್ಯವಹಾರ ಮತ್ತು ಸೂಕ್ಷ್ಮ ಹಣಕಾಸು ಅರ್ಥ ಮಾಡಿಕೊಳ್ಳಲು ಕಷ್ಟ ಎನಿಸಿದರು ನಮ್ಮ ಜೀವನದಲ್ಲಿ ಇವು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಕೆ.ಆರ್. ಸುರೇಶ್ ಕುಮಾರ್, ಸಹ ಪ್ರಾಧ್ಯಾಪಕಿ ಡಾ.ಡಿ. ವನಿತ, ಐ.ಕ್ಯೂ.ಎ.ಸಿ. ಸಂಚಾಲಕ ಜಿ.ಆರ್. ಮೋಹನ್‌ಕುಮಾರ್, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ: ಮಹಿಳೆ ಸಾವು




ಹೊಳೆನರಸೀಪುರ: ತಾಲ್ಲೂಕಿನ ಹೊನ್ನಿಕೊಪ್ಪಲು ತಿರುವಿನಲ್ಲಿ ಶುಕ್ರವಾರ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಬೈಕ್‌ನಲ್ಲಿ ತೆರಳುತ್ತಿದ್ದ ಮಹಿಳೆ ಮೃತಪಟ್ಟಿದ್ದಾರೆ.

ತಾಲ್ಲೂಕಿನ ರಂಗೇನಹಳ್ಳಿಯ ಶಂಕರೇಗೌಡರ ಪತ್ನಿ ಮಂಜುಳ (38) ಮೃತರು. ಸಂಬಂಧಿಕರ ಮನೆಯ ಪೂಜೆಗೆ ತೆರಳಿದ್ದ ಅವರು ಗ್ರಾಮಕ್ಕೆ ಮರಳುತ್ತಿದ್ದಾಗ ವೇಗವಾಗಿ ಬಂದ ಬಸ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಮಂಜುಳ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೈಕ್ ಸವಾರನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಯುವನಿಧಿ: 3 ತಿಂಗಳಿಗೊಮ್ಮೆ ಸ್ವಯಂ-ಘೋಷಣೆ ಮಾಡಿ

ಹಾಸನ: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆ ಫಲಾನುಭವಿಗಳು ಇನ್ನು ಮುಂದೆ ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳಬೇಕು.

ವೆಬ್ ಸೈಟ್ https://sevasindhugs.karnataka.gov.in ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಬೇಕು.

# ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಸಾಲ ಸೌಲಭ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಮಹಿಳೆಯರು ಆರ್ಥಿಕವಾಗಿ ಸಬಲರಾಗಲು ಸರ್ಕಾರ ರೂಪಿಸಿರುವ ಹಲವು ಯೋಜನೆಗಳಿಗೆ ಬ್ಯಾಂಕಿನಿಂದ ಸಾಲ ನೀಡಲಾಗುವುದು ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ವ್ಯವಸ್ಥಾಪಕಿ ಭಾಗ್ಯ ತಿಳಿಸಿದರು.

ಪಟ್ಟಣದ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಹರ್ಷಿತ ಆಲೂರು ಯೋಜನೆ ಮತ್ತು ಮಹಿಳಾ ಸ್ವ-ಸಹಾಯ ಸಂಘಗಳ ಒಕ್ಕೂಟ ಸಹಯೋಗದೊಂದಿಗೆ ಏರ್ಪಡಿಸಿದ್ದ ವಿಶ್ವ ಮಹಿಳಾ ದಿನಾಚರಣೆ ಹಾಗೂ ಹರ್ಷಿತ ಸಂಸ್ಥೆಯ 25ನೇ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದರು.




ಮಹಿಳೆಯರಿಗೆ ಬ್ಯಾಂಕ್‌ನಿಂದ ವ್ಯಾಪಾರ ಸಾಲ, ಸಣ್ಣ ಮತ್ತು ಮಧ್ಯಮ ಉದ್ಯಮಶೀಲತಾ ಸಾಲ, ಮಹಿಳಾ ಸ್ವ-ಸಹಾಯ ಸಂಘಗಳಿಗೆ ಅಲ್ಪಾವಧಿ ಮತ್ತು ದೀರ್ಘಾವಧಿ ಸಾಲ, ಮಹಿಳಾ ಸಮ್ಮಾನ್ ಉಳಿತಾಯ ಯೋಜನೆ, ಸುಕನ್ಯಾ ಸಮೃದ್ಧಿ ಯೋಜನೆ ಸೇರಿ ಅನೇಕ ರೀತಿ ಸಾಲಗಳನ್ನು ಕೊಡಲಾಗುವುದು. ಇಂದು ಮಹಿಳೆಯರು ಎಲ್ಲ ರಂಗಗಳಲ್ಲೂ ತಮ್ಮದೇ ಛಾಪು ಮೂಡಿಸಿರುವುದರಿಂದ ಅಸಹಾಯಕರಿಗೆ ಸಹಾಯ ಮಾಡಬೇಕು ಎಂದರು.

ಗ್ರೇಡ್-2 ತಹಶೀಲ್ದಾರ್ ಕೆ. ಆರ್. ಪೂರ್ಣಿಮ ಮಾತನಾಡಿ, ಕೆಲ ದಶಕಗಳ ಹಿಂದೆ ಹೆಣ್ಣು ಕೇವಲ ಮನೆಗೆ ಸೀಮಿತವಾಗಿದ್ದಳು. ಇಂದು ಎಲ್ಲ ರಂಗಗಳಲ್ಲೂ ಸಾಧನೆ ಮಾಡಿದ್ದಾಳೆ. ಹೆಣ್ಣು ಛಲದಿಂದ ಮುನ್ನಡೆಯುವವಳು. ಹೆಣ್ಣನ್ನು ಕಡೆಗಣಿಸದೆ ಕುಟುಂಬದಲ್ಲಿ ಸರಿ-ಸಮಾನವಾಗಿ ಕಾಣಬೇಕು. ಹೆಣ್ಣು ತಾಯಿ, ಹೆಂಡತಿಯಾಗಿ ಬೇಕು. ಆದರೆ ಮಗುವಾಗಿ ಬೇಡ ಎನ್ನುವುದನ್ನು ಬಿಡಬೇಕು. ಹೆಣ್ಣು ಮಕ್ಕಳಿಗೆ ವಯಸ್ಸು 18 ತುಂಬದೆ ಮದುವೆ ಬೇಡ. ಆರ್ಥಿಕವಾಗಿ ಕುಟುಂಬವನ್ನು ಸರದೂಗಿಸಿಕೊಳ್ಳುವುದರಲ್ಲಿ ಮಹಿಳೆಯರು ಮುಂದೆ ಇದ್ದಾರೆ ಎಂದರು.

ಜಿಲ್ಲಾ ಕೌಶಲ ಅಭಿವೃದ್ಧಿ ಅಧಿಕಾರಿ ವಿಜಯಲಕ್ಷ್ಮಿ ಮಾತನಾಡಿ, ಟೈಲರಿಂಗ್ ಸೇರಿದಂತೆ ಹಲವು ಯೋಜನೆಗಳಿಗೆ ತರಬೇತಿ ನೀಡಲಾಗುವುದು. ನಿರುದ್ಯೋಗ ಪದವೀಧರರು ಶಿಕ್ಷಣ ಮುಗಿದ ನಂತರ ಆರು ತಿಂಗಳೊಳಗೆ ಕೆಲಸ ಸಿಗದಿದ್ದಲ್ಲಿ, ಯುವನಿಧಿ ಯೋಜನೆಯಲ್ಲಿ ದಾಖಲು ಮಾಡಿಕೊಳ್ಳಬೇಕು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ.ಪಂ. ಅಧ್ಯಕ್ಷೆ ತಾಹೆರಾ ಬೇಗಂ ಮಾತನಾಡಿ, ಹೆಣ್ಣು ಸಂಸಾರದ ಕಣ್ಣು. ಕುಟುಂಬ ನಿರ್ವಹಣೆಯಲ್ಲಿ ಮಹಿಳೆಯರ ಪಾತ್ರ ಹೆಚ್ಚು ಎಂದರು.

ಹರ್ಷಿತ ಯೋಜನೆ ಸಂಸ್ಥೆ ಸ್ಥಾಪಕ ಅಧ್ಯಕ್ಷ ನಂಜಪ್ಪಶೆಟ್ಟಿ, ಜಿಲ್ಲಾ ಸಂಯೋಜಕ ನವೀನ್, ಮಾಲಿನಿ, ಕಲಾವತಿ, ಕೆನರಾ ಬ್ಯಾಂಕ್ ವ್ಯವಸ್ಥಾಪಕಿ ಭವ್ಯ, ಕೃಷಿ ಇಲಾಖೆ ಸಂಗೀತ, ನಬಾರ್ಡ್ ಗುರುಸ್ವಾಮಿ, ಪರಮೇಶ್, ಪಲ್ಲವಿ, ಲೋಕೇಶ್, ನಿವೃತ್ತ ಶಿಕ್ಷಕಿ ಲಲಿತಮ್ಮ ಉಪಸ್ಥಿತರಿದ್ದರು. ವಿವಿಧ ಕ್ಷೇತ್ರದ ಸಾಧಕ ಮಹಿಳೆಯರಿಗೆ ಸನ್ಮಾನಿಸಲಾಯಿತು.

# ನಿಯಮಿತ ನೇತ್ರ ತಪಾಸಣೆ ಅಗತ್ಯ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಮನುಷ್ಯನಿಗೆ ಕಣ್ಣು ಅತ್ಯಾವಶ್ಯಕ ಅಂಗವಾಗಿರುವುದರಿಂದ, ಕಣ್ಣನ್ನು ರಕ್ಷಿಸಿಕೊಳ್ಳುವುದು ಎಲ್ಲರ ಕರ್ತವ್ಯ ಎಂದು ಹಾಸನದ ಅಮ್ಮ ಕಣ್ಣು ಆಸ್ಪತ್ರೆ ನಿರ್ದೇಶಕ ಡಾ. ಸಂದೀಪ್ ತಿಳಿಸಿದರು.

ಪಟ್ಟಣದ ಆಲೂರು ಕ್ಲಿನಿಕ್ ಆವರಣದಲ್ಲಿ ಅಮ್ಮ ಕಣ್ಣಿನ ಆಸ್ಪತ್ರೆ ಮತ್ತು ರೆಟಿನಾಕೇರ್ ಸೆಂಟರ್ ಸಹಯೋಗದೊಂದಿಗೆ ಏರ್ಪಡಿಸಲಾಗಿದ್ದ ಉಚಿತ ಕಣ್ಣಿನ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡಿ, ಮನುಷ್ಯನಿಗೆ ಎಲ್ಲ ಅಂಗಗಳಿಗಿಂತ ಕಣ್ಣು ಅವಿಭಾಜ್ಯ ಅಂಗ. ವಯಸ್ಸಿಗನುಗುಣವಾಗಿ ಕಣ್ಣನ್ನು ಪರೀಕ್ಷೆ ಮಾಡಿಸಿಕೊಳ್ಳಬೇಕು. ಒತ್ತಡದಿಂದ ದೃಷ್ಟಿಸಿದರೆ ಕಣ್ಣಿನ ನರ ತನ್ನ ಶಕ್ತಿ ಕಳೆದುಕೊಳ್ಳುತ್ತದೆ. ಆಲೂರು ಕ್ಲಿನಿಕ್ ನಿರ್ದೇಶಕ ಡಾ. ಗಿರೀಶ್ ಬಸಪ್ಪ ಅವರು ತಮ್ಮ ಸೇವೆಯ 25 ವರ್ಷದ ರಜತ ಮಹೋತ್ಸವದ ಅಂಗವಾಗಿ ಉಚಿತ ಕಣ್ಣಿನ ಪರೀಕ್ಷೆ ಮತ್ತು ಪೊರೆ ತೆಗೆಯುವ ಶಸ್ತ್ರ ಚಿಕಿತ್ಸೆಗೆ ತಗಲುವ ಎಲ್ಲ ವೆಚ್ಚ ಸಹಕಾರ ನೀಡಿರುವುದನ್ನು ಸ್ಮರಿಸುತ್ತೇನೆ ಎಂದರು.

ಶಿಬಿರದಲ್ಲಿ 50 ಜನರಿಗೆ ಕಣ್ಣು ಪರೀಕ್ಷೆ ಮಾಡಲಾಯಿತು. 25 ಜನರಿಗೆ ಪೊರೆ ತೆಗೆಯುವ ಶಸ್ತ್ರ ಚಿಕಿತ್ಸೆಯನ್ನು ಅಮ್ಮ ಕಣ್ಣು ಆಸ್ಪತ್ರೆಯಲ್ಲಿ ಮಾಡಿಸಿದ ನಂತರ ಅವರ ಸ್ವಗ್ರಾಮಕ್ಕೆ ಕಳುಹಿಸಲಾಯಿತು. ಡಾ. ಗಿರೀಶ್ ಬಸಪ್ಪ, ವೈದ್ಯಕೀಯ ದಾದಿಯರಾದ ಪ್ರೀತಿ, ರುದ್ರೇಶ್, ಕಾವ್ಯ, ಕವನ, ಭವ್ಯ, ಪೂರ್ಣಿಮ ಶಿಬಿರದಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳ ಸಮಸ್ಯೆ ಆಲಿಸಲು ನ್ಯಾಯ ಯಾತ್ರೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯದ ಎಲ್ಲ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳ ಸಮಸ್ಯೆ ಆಲಿಸಲು, ಸ್ಕಾಲರ್‌ಶಿಪ್ ಸಮಸ್ಯೆ, ಹಾಸ್ಟೆಲ್ ಸುಧಾರಣೆ ಹೀಗೆ ವಿವಿಧ ತೊಂದರೆಗಳನ್ನು ಖುದ್ದು ಗಮನಿಸಿ ಸರ್ಕಾರಕ್ಕೆ ವರದಿ ನೀಡಲು ವಿದ್ಯಾರ್ಥಿ ನ್ಯಾಯ ಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಮನೀಶ್ ಬಿ.ರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ವಿವಿಗಳು ಏನೆಲ್ಲಾ ಸಮಸ್ಯೆ ಅನುಭವಿಸುತ್ತಿವೆ. ಹಾಸ್ಟೆಲ್ ಕೊರತೆ ಇದೆ. ಎಲ್ಲಕ್ಕಿಂತ ಮುಖ್ಯವಾಗಿ ಯಾವ ಕಾರಣಕ್ಕೆ ವಿದ್ಯಾರ್ಥಿಗಳು ಓದಿನಿಂದ ಹೊರಗೆ ಉಳಿಯುತ್ತಿದ್ದಾರೆ ಎಂಬುದರ ಬಗ್ಗೆ ಅಧ್ಯಯನ ಮಾಡಿ, ವಿದ್ಯಾರ್ಥಿಗಳಿಂದಲೂ ಅಭಿಪ್ರಾಯ ಪಡೆದು ವರದಿ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.




ಸಮಾನ ಶಿಕ್ಷಣ, ಪ್ರಾಮಾಣಿಕ ವಿದ್ಯಾರ್ಥಿ ನೀತಿಗಳು, ಆರ್ಥಿಕ ನೆರವು, ಕೌಶಲ್ಯ ವಿಕಾಸ, ಭದ್ರತಾ ಉದ್ಯೋಗಾವಕಾಶ ಸಿಗಬೇಕು ಎಂಬುದು ನಮ್ಮ ಬೇಡಿಕೆಯಾಗಿದೆ.

ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ಆಗಬೇಕು. ಅರ್ಹ ವಿದ್ಯಾರ್ಥಿಗಳಿಗೆ ಸಕಾಲಕ್ಕೆ ವಿದ್ಯಾರ್ಥಿ ವೇತನ ದೊರೆಯಬೇಕು. ಹಾಸ್ಟೆಲ್‌ಗಳನ್ನು ಸುಧಾರಣೆ ಮಾಡಿ ಅಲ್ಲಿ ಶುದ್ಧ ಮತ್ತು ಗುಣಮಟ್ಟದ ಆಹಾರ ನೀಡಬೇಕು ಎಂದು ಆಗ್ರಹಿಸಿದರು.

ರಾಜ್ಯದ ವಿದ್ಯಾರ್ಥಿಗಳ ಹಕ್ಕುಗಳನ್ನು ರಕ್ಷಿಸಲು ಹಾಗೂ ಅವರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಒದಗಿಸಲು ನಮ್ಮ ತಂಡವು ಈ ಯಾತ್ರೆ ಹಮ್ಮಿಕೊಂಡಿದ್ದೇವೆ. ಈಗಾಗಲೇ 8 ಜಿಲ್ಲೆಗಳನ್ನು ಪ್ರವಾಸ ಮಾಡಿದ್ದೇವೆ. ಹಾಸನ ವಿವಿಗೂ ಭೇಟಿ ನೀಡಲಿದ್ದೇವೆ ಎಂದರು.

ವಿದ್ಯಾರ್ಥಿ ಸಮುದಾಯದ ಪರವಾಗಿ, ಅವರ ಹಕ್ಕುಗಳಿಗಾಗಿ ಹೋರಾಡಲು ಮುಂದಾಗಿರುವ ನಮಗೆ ಎಲ್ಲ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಮತ್ತು ನಾಗರಿಕ ಸಮಾಜದ ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಡ್ರಗ್ಸ್ ಮತ್ತು ರ್‍ಯಾಗಿಂಗ್ ಪಿಡುಗು ನಿರ್ಮೂಲನೆ, ವಿದ್ಯಾರ್ಥಿನಿಯರ ಸುರಕ್ಷತೆ, ಸರ್ಕಾರಿ ವಿದ್ಯಾಸಂಸ್ಥೆಗಳ ಬಲವರ್ಧನೆ ನಮ್ಮ ಉದ್ದೇಶ ಎಂದ ಅವರು, ಇದೇ ವೇಳೆ ಹಾಸನ ವಿವಿಯನ್ನು ಇಲ್ಲೇ ಉಳಿಸಬೇಕು ಎಂಬ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

ರಾಷ್ಟ್ರೀಯ ಸಂಯೋಜಕ ಹೃತಿಕ್ ರವಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಅನ್ವಿತ್ ಕಟೀಲ್, ಶಿವಕುಮಾರ್ ಎನ್‌ಎಸ್‌ಯುಐ ಅಧ್ಯಕ್ಷ ಸುಪ್ರೀತ್ ಗೌಡ, ಉಪಾಧ್ಯಕ್ಷ ಅಭಿಲಾಷ್ ಇದ್ದರು.

# ಬಿದರೂರಿನಲ್ಲಿ ರೆಡ್ ಕ್ರಾಸ್‌ನಿಂದ ರಕ್ತದಾನ ಶಿಬಿರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಸಮಾಜ ಸೇವಾ ಕಾರ್ಯಗಳನ್ನು ನಿರ್ವಹಿಸುತ್ತಿದ್ದು, ಯುವ ಜನತೆ ಸೇವಾ ಮನೋಭಾವನೆಯನ್ನು ರೂಢಿಸಿಕೊಳ್ಳಬೇಕು ಎಂದು ರೆಡ್ ಕ್ರಾಸ್ ಸಂಸ್ಥೆ ತಾಲ್ಲೂಕು ಸಭಾಪತಿ ವಿ.ಎ. ನಂಜುಂಡಸ್ವಾಮಿ ತಿಳಿಸಿದರು.

ತಾಲ್ಲೂಕಿನ ಬಿದರೂರು ಗ್ರಾಮದಲ್ಲಿ ಕೊಣನೂರು ಬಿ.ಎಂ. ಶೆಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ನಡೆಯುತ್ತಿರುವ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ಮತ್ತು ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ವಿದ್ಯಾಭ್ಯಾಸದ




ಜೊತೆಗೆ ಸಮಾಜದ ಆರೋಗ್ಯದ ಕಡೆಯು ಗಮನಕೊಡಬೇಕಿದೆ. ನಿತ್ಯವೂ ಆರೋಗ್ಯದ ಬಗ್ಗೆ ಎಚ್ಚರಿಕೆ ಇರಬೇಕು. ಅಲ್ಲದೆ ವರ್ಷಕ್ಕೆ ಒಮ್ಮೆಯಾದರೂ ರಕ್ತದಾನ ಮಾಡಿ ಕಷ್ಟದಲ್ಲಿರುವವರಿಗೆ ನೆರವಾಗಬೇಕೆಂದು ಸಲಹೆ ನೀಡಿದರು.

ಕಾಲೇಜು ಅಭಿವೃದ್ಧಿ ಸಮಿತಿ ಕಾರ್ಯಾಧ್ಯಕ್ಷ ಚೌಡೇಗೌಡ ಮಾತನಾಡಿ, ಯುವಕ ಯುವತಿಯರಲ್ಲಿ ಸಾಮಾಜಿಕ ಕಳಕಳಿ ಸ್ವಯಂ ಪ್ರೇರಿತವಾಗಿದ್ದರೇ ಯಾರದೇ ಒತ್ತಡವೂ ಬೇಕಿಲ್ಲ. ಅವರೇ ನೇರವಾಗಿ ಸಾಮಾಜಿಕ ಕಾರ್ಯದಲ್ಲಿ ತೊಡಗಿಕೊಳ್ಳುತ್ತಾರೆ ಎಂದರು.

ನಿವೃತ್ತ ಪ್ರಾಂಶುಪಾಲ ಬಸವರಾಜು ಮಾತನಾಡಿ, ಕೊಣನೂರು ಬಿಎಂ ಶೆಟ್ಟಿ ಸರ್ಕಾರಿ ಕಾಲೇಜಿನ ಆಡಳಿತ ಮಂಡಳಿ ಯುವ ಜನರ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿ ಕಾರ್ಯರೂಪಕ್ಕೆ ತರುತ್ತಿದೆ. ಇದಕ್ಕೆ ಕ್ಷೇತ್ರದ ಶಾಸಕರು, ಅಭಿವೃದ್ಧಿ ಸಮಿತಿ ಸದಸ್ಯರು, ಪ್ರಾಧ್ಯಾಪಕರ ನಿರಂತರ ಚಟುವಟಿಕೆಗಳು ಕಾರಣವಾಗಿವೆ. ಗ್ರಾಮೀಣ ಭಾಗದಲ್ಲಿ ಸೇವಾ ಮನೋಭಾವನೆ ವಿದ್ಯಾರ್ಥಿಗಳಲ್ಲಿ ಉಂಟಾದರೇ ಅದು ಸಮಾಜದ ಉನ್ನತಿಗೆ ನೆರವಾಗುತ್ತದೆ ಎಂದು ಹೇಳಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ತಾಲ್ಲೂಕು ಘಟಕದ ಸದಸ್ಯರಾದ ದೊಡ್ಡೇಗೌಡ, ರವಿಕುಮಾರ್, ಜಯಪ್ಪ, ಉಮೇಶ್ ಕುಮಾರ್, ಮೂಡ್ಲಿಗೌಡ, ಸತೀಶ್, ಭರತೇಶ್ ಇತರರಿದ್ದರು.

# ನಮ್ಮ ಕ್ಲಿನಿಕ್‌ಗೆ ಶಾಸಕ ಸ್ವರೂಪ್ ಚಾಲನೆ

ಹಾಸನ: ನಗರ ಹೊರ ವಲಯದ ಸತ್ಯಮಂಗಲ ಬಡಾವಣೆಯಲ್ಲಿ ಆರಂಭಿಸಲಾದ ನಮ್ಮ ಕ್ಲಿನಿಕ್ ಅನ್ನು ಶಾಸಕ ಹೆಚ್.ಪಿ. ಸ್ವರೂಪ್ ಶುಕ್ರವಾರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ನಗರಸಭೆ ನಗರ ಪಾಲಿಕೆಯಾಗಿ ಬೆಳೆಯುತ್ತಿರುವ ಪ್ರಸ್ತುತ ಸಂದರ್ಭದಲ್ಲಿ ಹೆಚ್ಚಿನ ಮೂಲಸೌಕರ್ಯಗಳಿಗೆ ಸರ್ಕಾರಕ್ಕೆ ಮನವಿ ಮಾಡಿ ಹಲವು ಕಾರ್ಯಕ್ರಮಗಳನ್ನು ಹಾಸನಕ್ಕೆ ತರಲಾಗುತ್ತಿದೆ ಎಂದರು.

ಅದರಂತೆ ಸತ್ಯಮಂಗಲಕ್ಕೆ ಹೇಮಾವತಿ ನದಿಯಿಂದ ಕುಡಿಯುವ ನೀರು ಒದಗಿಸುವ ಬಹುಮುಖ್ಯ ಯೋಜನೆಗೆ ಸರ್ಕಾರ ಒಪ್ಪಿಗೆ ಸೂಚಿಸಿದೆ. ಈಗಾಗಲೇ ಕಾಮಗಾರಿ ಮುಗಿಯುವ ಹಂತದಲ್ಲಿದೆ. ಮನುಷ್ಯನ ಆರೋಗ್ಯಕ್ಕೆ ಶುದ್ಧ ಕುಡಿಯುವ ನೀರು ಬಹಳ ಮುಖ್ಯ. ಅದನ್ನು ಮನಗಂಡು ಅವರ ಆರೋಗ್ಯ ರಕ್ಷಣೆಗಾಗಿ ನಮ್ಮ ಕ್ಲಿನಿಕ್ ತೆರೆಯಲಾಗಿದ್ದು, ಸದುಪಯೋಗ ಪಡೆದುಕೊಳ್ಳಬೇಕು ಎಂದರು.



ಆಸ್ಪತ್ರೆಗೆ ಅಗತ್ಯ ಇರುವ ವೈದ್ಯಕೀಯ ಸಿಬ್ಬಂದಿ ಹಾಗೂ ಮೂಲಸೌಕರ್ಯ ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನ ತಂದು ಬಡಾವಣೆ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಭರವಸೆ ನೀಡಿದರು. ನಗರಸಭೆ ಅಧ್ಯಕ್ಷ ಎಂ.ಚಂದ್ರೇಗೌಡ, ಸದಸ್ಯ ವಾಸುದೇವ್ ಮತ್ತಿತರರಿದ್ದರು.

# ವಿದ್ಯಾರ್ಥಿಗಳು ಜಾನಪದ ಸಂಸ್ಕೃತಿ ಅರಿಯಲಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ವಿದ್ಯಾರ್ಥಿಗಳು ಆಧುನಿಕ ಭರಾಟೆಯಲ್ಲಿ ಮುಳುಗುವ ಬದಲು ಗ್ರಾಮೀಣ ಜಾನಪದ ಸಂಸ್ಕೃತಿಯನ್ನು ಓದಿ ಜ್ಞಾನ ಹೊಂದಬೇಕು ಎಂದು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಬ್ಬಾಳು ಹಾಲಪ್ಪ ಸಲಹೆ ನೀಡಿದರು.

ಪಟ್ಟಣದ ವೈಡಿಡಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಕಾಲೇಜು ಶಿಕ್ಷಣ ಇಲಾಖೆ, ಐಕ್ಯೂಎಸಿ ಹಾಗೂ ಸಾಂಸ್ಕೃತಿಕ ವೇದಿಕೆಯಿಂದ ಗುರುವಾರ ಹಮ್ಮಿಕೊಂಡಿದ್ದ ನಮ್ಮ ಸಂಸ್ಕೃತಿ ನಮ್ಮ ಹೆಮ್ಮೆ ಜಾನಪದ ಉತ್ಸವ ಉದ್ಘಾಟಿಸಿ ಮಾತನಾಡಿದರು. ಜಾನಪದ ಸಾಹಿತ್ಯದಲ್ಲಿ ಮೂಲ ಶಿಕ್ಷಣದ ಪಾಠವಿದೆ. ಮನುಷ್ಯನ ಅರಿವನ್ನು ವಿಸ್ತರಿಸಲು ಸಾಹಿತ್ಯ ಪೂರಕವಾಗಿದೆ.

ಪೂರ್ವಜರು ಜಾನಪದ ಸಾಹಿತ್ಯದ ಮೂಲಕ ಮೌಲ್ಯಗಳನ್ನು ಸಮಾಜಕ್ಕೆ ತಿಳಿಸುವ ಕಾರ್ಯ ಮಾಡಿದ್ದಾರೆ. ವಿದ್ಯಾರ್ಥಿಗಳು ಜಾನಪದ ಸಾಹಿತ್ಯದ ಬಗ್ಗೆ ತಿಳಿದುಕೊಳ್ಳಬೇಕು. ಗೀತೆ, ಗಾದೆ, ಒಗಟುಗಳನ್ನು ಸಂಗ್ರಹಿಸುವ ಕಾರ್ಯವಾಗಬೇಕು ಎಂದರು.

ಕಂಸಾಳೆ ಪದ, ಗೀಗಿ ಪದ, ಕೋಲಾಟ, ರಾಗಿ ಬೀಸೋ ಪದ, ಸುಗ್ಗಿ ಹಾಡು ಸೇರಿ ಅನೇಕ ಬಗೆಯ ಜಾನಪದ ಗೀತೆಗಳು ಆಯಾ ಪ್ರದೇಶದ ಜನರ ದೈನಂದಿನ ಚಟುವಟಿಕೆಗಳನ್ನು, ಕೌಟುಂಬಿಕ ಜೀವನ, ಸಂಬಂಧಗಳನ್ನು ಪರಿಚಯಿಸುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಮಹೇಶ್ ಮಾತನಾಡಿ, ಆಧುನೀಕರಣದ ಜಂಜಾಟಕ್ಕೆ ಸಿಲುಕಿ ಜನಪದ ಕಲೆಗಳು ನಶಿಸುತ್ತಿವೆ. ಜನಪದ ಶ್ರಮ ಸಂಸ್ಕೃತಿಯ ಪ್ರತೀಕವಾಗಿದೆ. ಆದರೆ ಗ್ರಾಮೀಣ ಭಾಗದಲ್ಲಿನ ಸಂಸ್ಕೃತಿ ಮರೆಯಾಗುತ್ತಿದೆ ಎಂದರು.

ಅಧ್ಯಾಪಕರಾದ ಡಾ. ನಾಗೇಂದ್ರಪ್ಪ, ಮರಿಯಾ ಪಿಂಟೋ, ಬಾಬು ಪ್ರಸಾದ್, ಮಧು, ಲೋಕೇಶ್, ಮೋಹನ ಕುಮಾರ್, ವಸಂತ್ ಕುಮಾರ್, ಪವಿತ್ರ, ದಿವ್ಯಶ್ರೀ, ವೀರಭದ್ರಪ್ಪ, ಪದ್ಮೇಗೌಡ, ಮಲ್ಲೇಶ್ ಗೌಡ, ಪುಟ್ಟಸ್ವಾಮಿ ಇತರರಿದ್ದರು.

# ಖಾಸಗಿ ಶಾಲೆಗಳ ವ್ಯಾಮೋಹ ಕಡಿಮೆಯಾಗಲಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಸರ್ಕಾರಿ ಕಾಲೇಜುಗಳ ಉಳಿವಿಗಾಗಿ, ಆಂದೋಲನ ನಡೆಸುತ್ತಿರುವುದು ಬೇಸರದ ಸಂಗತಿ ಕಾರಣ ಪೋಷಕರು ಖಾಸಗಿ ಕಾಲೇಜಿನ ಮೇಲಿನ ವ್ಯಾಮೋಹವೇ ಕಾರಣವೆಂದು ಶಾಸಕ ಹೆಚ್ ಕೆ ಸುರೇಶ್ ಹೇಳಿದರು.

ಶ್ರೀ ಚೆನ್ನಕೇಶವ ದೇವಸ್ಥಾನದ ಮುಂಭಾಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಥಮ ವರ್ಷದ ಬಿಸಿಎ ಪ್ರವೇಶಾತಿ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಖಾಸಗಿ ಶಾಲೆ ಕಾಲೇಜುಗಳು ವಿದ್ಯೆಯನ್ನು ವ್ಯಾಪಾರದ ಸರಕಾಗಿಸಿವೆ. ಶಾಲೆಗಳ ಅಂದ ಚೆಂದಕ್ಕೆ ಪೋಷಕರು ಮಾರು ಹೋಗುತ್ತಿದ್ದಾರೆ. ಇದರಿಂದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಇಳಿಮುಖವಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಕರು, ಪ್ರಾಯೋಗಾಲಯ, ಕ್ರೀಡೆ, ಇನ್ನೂ ಮುಂತಾದ ಚಟುವಟಿಕೆಗಳು ಇರುತ್ತವೆ. ಅಲ್ಲದೆ ಎನ್‌ಎಸ್‌ಎಸ್ ಶಿಬಿರ ಕೂಡ ಇರುತ್ತದೆ. ಸರ್ಕಾರ ಕೂಡ ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಮಕ್ಕಳ ಸಂಖ್ಯೆ ಹೆಚ್ಚಳಕ್ಕೆ ಆಂದೋಲನ, ಹಳ್ಳಿ ಹಳ್ಳಿಗಳಲ್ಲಿ ಶಿಬಿರಗಳನ್ನು ನಡೆಸುತ್ತಿದ್ದರೂ ಪೋಷಕರ ಮನಸ್ಸು ಮಾತ್ರ ಖಾಸಗಿ ಶಾಲೆಗಳ ಕಡೆ ಇರುತ್ತದೆ. ಉತ್ತಮ ಶಿಕ್ಷಣ ನೀಡುವಲ್ಲಿ ಸರ್ಕಾರಿ ಶಾಲೆಗಳು ಕಾಲೇಜುಗಳು ಖಾಸಗಿ ಕಾಲೇಜುಗಳ ಜೊತೆ ಪೈಪೋಟಿ ನಡೆಸುತ್ತಿವೆ, ಸರ್ಕಾರಿ ಶಾಲೆ ಕಾಲೇಜುಗಳನ್ನು ಉಳಿಸಿ ಬೆಳೆಸುವ ಕೆಲಸವನ್ನು ಪೋಷಕರು ಮಾಡಬೇಕು ಎಂದರು. ಪ್ರಾಂಶುಪಾಲ ಡಾ. ಹೆಚ್. ಎಂ. ಮಹೇಶ್, ಅಧ್ಯಾಪಕರಾದ ಡಾ. ನಾಗೇಂದ್ರಪ್ಪ, ಮರಿಯಾ ಪಿಂಟೋ, ಬಾಬು ಪ್ರಸಾದ್, ಮಧು, ಲೋಕೇಶ್, ಮೋಹನ ಕುಮಾರ್, ವಸಂತ್ ಕುಮಾರ್, ಪದ್ಮೇಗೌಡ, ಮಲ್ಲೇಶ್ ಗೌಡ, ಪುಟ್ಟಸ್ವಾಮಿ, ಬೇಲೂರು ವೃತ್ತ ನಿರೀಕ್ಷಕ ರೇವಣ್ಣ, ಸಬ್ ಇನ್ಸ್‌ಪೆಕ್ಟರ್ ಎಸ್. ಜಿ. ಪಾಟೀಲ್ ಹಾಗೂ ಇತರರು ಇದ್ದರು.

# ಉಪಯೋಗಿಸದ ಕೈಗಾರಿಕಾ ಭೂಮಿ ಮರಳಿಸಿ: ಭೂ ಮಾಲೀಕರ ಆಗ್ರಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲ್ಲೂಕಿನ 11 ಗ್ರಾಮಗಳ ರೈತರ ಜಮೀನನ್ನು ಸ್ವಾಧೀನಪಡಿಸಿಕೊಂಡಿದ್ದ ಕೆಐಎಡಿಬಿ, ಕೆಲವು ರೈತರಿಗೆ ವಾಪಸ್ ಭೂಮಿ ನೀಡಿಲ್ಲ, ಭೂಮಿ ನೀಡಿದ ಕುಟುಂಬಕ್ಕೆ ಒಂದು ಉದ್ಯೋಗ ಎಂಬ ಭರವಸೆಯನ್ನೂ ಈಡೇರಿಸಿಲ್ಲ ಎಂದು ಭೂ ಸಂತ್ರಸ್ತರ ಹೋರಾಟ ಸಮಿತಿಯ ಶ್ರೀನಿವಾಸ್ ಮೂರ್ತಿ ಆರೋಪಿಸಿದರು.




ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಈಗ ನಮಗೆ ಜಮೀನಿಲ್ಲ. ಸರ್ಕಾರದ ಕಡೆಯಿಂದ ಯಾವುದೇ ಅನುಕೂಲ ಆಗಿಲ್ಲ, ರೈತರಿಗೆ ಕನಿಷ್ಠ ಒಂದು ಗುರುತಿನ ಚೀಟಿಯನ್ನಾದರೂ ನೀಡಬೇಕೆಂದು ಮನವಿ ಮಾಡಿದರು.

ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಕಸಬಾ ಮತ್ತು ಶಾಂತಿಗ್ರಾಮ ಹೋಬಳಿಗೆ ಸೇರಿದ ಬೊಮ್ಮನಾಯ್ಕನಹಳ್ಳಿ, ಚನ್ನಪಟ್ಟಣ, ಚಿಕ್ಕಬಸವನಹಳ್ಳಿ, ದೊಡ್ಡಬಸವನಹಳ್ಳಿ, ಕೌಶಿಕ, ಸಮುದ್ರವಳ್ಳಿ, ಸಂಕಲಾಪುರ, ಪೆರುಮೇನಹಳ್ಳಿ, ನಾಗತವಳ್ಳಿ, ಕೊಕ್ಕನಘಟ್ಟ, ಹನುಮಂತಪುರ ಸೇರಿ 11 ಗ್ರಾಮಗಳಲ್ಲಿ ಹಲವು ವರ್ಷಗಳ ಹಿಂದೆ 2477 ಎಕರೆ ಭೂಮಿ ಸ್ವಾಧೀನ ಮಾಡಿದೆ.

ಆದರೆ ಯಾವುದೇ ಉದ್ಯಮ ಆರಂಭಿಸದ ಕಾರಣ ರೈತರು ನೀಡಿರುವ ಜಮೀನಿನ ಬದಲಾಗಿ ಪ್ರೊರೇಟಾ ದರದಲ್ಲಿ ಅಭಿವೃದ್ಧಿಪಡಿಸಿದ ಜಮೀನನ್ನು ಮಂಜೂರು ಮಾಡಿಕೊಡಬೇಕು ಎಂಬ ನಿಯಮ ಇದೆ. ಕೈಗಾರಿಕಾ ಅಭಿವೃದ್ಧಿಗಾಗಿ ಜಮೀನು ನೀಡುವ ಕುಟುಂಬಗಳ ಒಬ್ಬರಿಗೆ ಸ್ಥಾಪಿತವಾಗುವ ಉದ್ಯಮದಲ್ಲಿ ಕೆಲಸ ದೊರಕುತ್ತದೆಂಬ ಆಶಾಭಾವದಿಂದ ಫಲವತ್ತಾದ ಜಮೀನನ್ನು ಅತ್ಯಂತ ಕಡಿಮೆ ದರಕ್ಕೆ ಅಂದರೆ 1 ಎಕರೆಗೆ 50-60 ಸಾವಿರ ರೂ.ಗೆ ನೀಡಿದೆವು. 1990-1993ರ ಅವಧಿಯಲ್ಲಿ ಸ್ವಾಧೀನ ಪಡಿಸಿಕೊಂಡರೂ, 2008 ರವರೆಗೂ ಯಾವುದೇ ಕಾರ್ಖಾನೆ ಸ್ಥಾಪನೆಯಾಗಿಲ್ಲ. ನಮ್ಮ ಜಮೀನು ವಾಪಸ್ ಕೊಡುವಂತೆ ಕಳೆದ 17 ವರ್ಷಗಳಿಂದ ಕಾನೂನು ಹೋರಾಟ ಮಾಡುತ್ತಿದ್ದೇವೆ. ನಮ್ಮ ಹೋರಾಟಕ್ಕೆ ಒಂದು ತಾರ್ಕಿಕ ಮತ್ತು ತಾತ್ವಿಕ ಅಂತ್ಯ ಕಂಡುಕೊಳ್ಳಬೇಕೆಂಬ ಉದ್ದೇಶದಿಂದ ಹೋರಾಟ ಮಾಡುತ್ತಿದ್ದೇವೆ. ಮುಂದುವರಿದ ಭಾಗವಾಗಿ ಪರಿಷ್ಕೃತ ಮನವಿಯಂತೆ ಕ್ರಮ ತೆಗೆದುಕೊಳ್ಳುವಂತೆ ಸಿಎಂ, ಸರ್ಕಾರ, ಕೈಗಾರಿಕಾ ಸಚಿವರು, ಅಧಿಕಾರಿಗಳಿಗೂ ಮನವಿ ಸಲ್ಲಿಸಲಾಗಿದೆ ಎಂದರು. ಸರ್ಕಾರ ಅಭಿವೃದ್ಧಿಪಡಿಸಿರುವ ಮತ್ತು ತಮ್ಮ ಸ್ವಾಧೀನದಲ್ಲೇ ಖಾಲಿ ಜಮೀನಿನಲ್ಲಿ ರೈತರಿಂದ ಸ್ವಾಧೀನಪಡಿಸಿಕೊಂಡ ಜಮೀನಿನ ಬದಲು ಶೇ.25 ರಷ್ಟು ಅಭಿವೃದ್ಧಿಪಡಿಸಿದ ಜಮೀನನ್ನು ಪ್ರೊರೇಟಾ ದರದಲ್ಲಿ ಮಂಜೂರು ಮಾಡಬೇಕು. ನಮಗೆ ಮಂಜೂರು ಮಾಡುವ ಜಮೀನಿನ ಕ್ಷೇತ್ರಕ್ಕೆ ಈ ಹಿಂದೆ ನೀಡಿದ ಪರಿಹಾರವನ್ನು ಪ್ರೊರೇಟಾ ದರದಲ್ಲಿ ಹಿಂತಿರುಗಿಸಬೇಕು ಎಂದು ಆಗ್ರಹಿಸಿದರು. ಸ್ವಾಧೀನಪಡಿಸಿಕೊಂಡ ಜಮೀನಿನ ವ್ಯಕ್ತಿವಾರು ದಾಖಲೆಗಳನ್ನು ಪ್ರಕಟಿಸಿ ಭೂಮಿ ನೀಡಿದ ರೈತರಿಗೆ ಕನಿಷ್ಠ ಒಂದು ಗುರುತಿನ ಚೀಟಿಯನ್ನಾದರೂ ನೀಡಿದರೆ ಸರ್ಕಾರದಲ್ಲಿ ರೈತರು ಸವಲತ್ತು ಪಡೆಯಲು ಅನುಕೂಲವಾಗಲಿದೆ. ಗುರುತಿನ ಚೀಟಿ ನೀಡಲಾದರೂ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ತಾಲ್ಲೂಕು ಭೂಸಂತ್ರಸ್ತರ ರೈತ ಹೋರಾಟ ಸಮಿತಿಯ ಸುರೇಶ್, ಕಮಲಮ್ಮ, ಪುಟ್ಟಸ್ವಾಮಿಗೌಡ ಇತರರಿದ್ದರು.

# ದೇಹವೇ ಅತಿದೊಡ್ಡ ಸಂಪತ್ತು

**ಚೇತನ್ ಗುರೂಜಿ,**
ಬಸವ ಯೋಗ ಕೇಂದ್ರ, ಅಡಗೂರು

ಶರೀರದ ಮಹತ್ವವನ್ನು ಅರ್ಥಮಾಡಿಕೊಂಡವರು ಯಾವತ್ತೂ ಅದನ್ನು ನಿರ್ಲಕ್ಷಿಸುವುದಿಲ್ಲ. ಭಾರತೀಯ ಸಂಸ್ಕೃತಿಯಲ್ಲಿ ದೇಹಕ್ಕೆ ವಿಶೇಷ ಪ್ರಾಮುಖ್ಯತೆ ನೀಡಲಾಗಿದೆ. ಸಂಸ್ಕೃತದಲ್ಲಿ, ಶರೀರ ಮಾಧ್ಯಮಂ ಕಲು ಧರ್ಮ ಸಾಧನಂ ಎಂದು ಹೇಳಲಾಗಿದೆ, ಅಂದರೆ ಎಲ್ಲಾ ಸಾಧನೆಗಳಿಗೂ ದೇಹವೇ ಮೂಲ. ಶರಣರು ಕೂಡಾ ದೇಹವನ್ನು ದೇಗುಲವೆಂದೇ ವರ್ಣಿಸಿದ್ದಾರೆ.

ಇಂತಹ ಅಮೂಲ್ಯ ಶರೀರವನ್ನು ನಾವು ಎಷ್ಟು ಹೊತ್ತುಕೊಳ್ಳುತ್ತಿದ್ದೇವೆ ಎಂಬುದರ ಬಗ್ಗೆ ಯೋಚಿಸುವ ಸಮಯ ಬಂದಿದೆ.

ನಾವು ದೇಹದ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಿದ್ದೇವೆ ಎಂದರೆ, ಅದು ಭವಿಷ್ಯದಲ್ಲಿ ಅಪಾಯಕಾರಿಯಾಗಬಹುದು. ಆರೋಗ್ಯ ಕಾಪಾಡಿಕೊಳ್ಳದೆ ಹೋದರೆ, ನಾವು ಗಳಿಸಿದ ಹಣವೇ ನಮ್ಮ ಕಾಯಿಲೆಗಳಿಗೆ ಚಿಕಿತ್ಸೆಗೆ ತೆರವಾಗುವ ಸ್ಥಿತಿ ಉಂಟಾಗುತ್ತದೆ. ಈ ಪರಿಸ್ಥಿತಿಯು ಕೌಟುಂಬಿಕ ಆರ್ಥಿಕ ಸಮತೋಲನವನ್ನು ಕದಡುವುದರ ಜೊತೆಗೆ, ನಮ್ಮ ನೆಮ್ಮದಿಯನ್ನೂ ಹಾಳು ಮಾಡುತ್ತದೆ.

ಅನಾರೋಗ್ಯಕ್ಕೆ ಒಳಗಾದಾಗ ಕೆಲಸದ ಸಾಮರ್ಥ್ಯ ಕುಗ್ಗಿ, ದಿನನಿತ್ಯದ ಚಟುವಟಿಕೆಗಳೂ ಅಸಾಧ್ಯವಾಗುತ್ತವೆ. ಹೌದು, ಕೆಲವೊಂದು ಕಾಯಿಲೆಗಳು ಶರೀರವನ್ನು ತಿದ್ದಲು ಸಹಾಯ ಮಾಡಬಹುದು.

ಆದರೆ ನಿರ್ಲಕ್ಷ್ಯ ಮಾಡಿದರೆ, ಅನಾರೋಗ್ಯ ನಮ್ಮ ಜೀವನವನ್ನು ನರಕವಾಗಿಸಬಹುದು. ಆದ್ದರಿಂದ, ದೇಹವನ್ನು ಅತಿಯಾದ ಶ್ರಮಕ್ಕೆ ಒಳಪಡಿಸಬಾರದು ಮತ್ತು ಅದರ ಆರೈಕೆಗೂ ನಿರ್ಲಕ್ಷ್ಯ ತೋರಬಾರದು.




## ದೇಹ ಅನನ್ಯ ವಸ್ತು, ಬೆಲೆಕಟ್ಟಲಾಗದ ಸಂಪತ್ತು

ನಮ್ಮ ದೇಹವು ಒಂದು ಅದ್ಭುತವಾದ ಕಾರ್ಖಾನೆ. ಇದರೊಳಗೆ ರಕ್ತ, ಮಾಂಸ, ಮಜ್ಜೆ, ವೀರ್ಯ ಇತ್ಯಾದಿಗಳನ್ನು ಸ್ವತಃ ಶರೀರವೇ ಉತ್ಪತ್ತಿ ಮಾಡುತ್ತದೆ. ಈ ಎಲ್ಲವನ್ನು ಹಣಕೊಟ್ಟು ಹೊರಗಿನಿಂದ ತಂದುಕೊಳ್ಳಲು ಸಾಧ್ಯವಿಲ್ಲ. ನಾವು ದೇಹದ ಮಹತ್ವವನ್ನು ಸ್ಪಷ್ಟವಾಗಿ ತಿಳಿದುಕೊಂಡರೂ, ಅದನ್ನು ನಿರ್ಲಕ್ಷ್ಯಿಸುತ್ತೇವೆ. ಇದು ದೇವರಿಂದ ಉಚಿತವಾಗಿ ದೊರೆತ ದಾನವಷ್ಟೇ, ಅದಕ್ಕೆ ನಾವು ಯಾವ ಪ್ರಾಮುಖ್ಯತೆಯನ್ನೂ ಕೊಡುತ್ತಿಲ್ಲ. ಆದರೆ, ದೇವರು ಪ್ರತಿದಿನ ಶರೀರವನ್ನು ಬಳಸುವ ಬಿಲ್ ಅನ್ನು ಕೇಳಿದ್ದರೆ, ನಾವು ಅದನ್ನು ಹೆಚ್ಚು ಕಾಳಜಿಯೊಂದಿಗೆ ನೋಡಿಕೊಂಡಿರುತ್ತಿದ್ದೆವೆಂಬುದು ನಿಜ.

## ಆರೋಗ್ಯದ ಕಡೆಗೆ ಗಮನ ಹರಿಸೋಣ

ನಮ್ಮ ದೇಹವು ಯಾವತ್ತೂ ಶ್ರಮಿಸುತ್ತಲೇ ಇರುತ್ತದೆ, ನಮಗೆ ವಿಶ್ರಾಂತಿ ಬೇಕಾದರೂ, ನಮ್ಮ ಅಂಗಾಂಗಗಳು ನಿರಂತರ ಕೆಲಸ ಮಾಡುತ್ತಲೇ ಇರುತ್ತವೆ. ನಾವೂ ಸಹ ಅವುಗಳಿಗೆ ಕೇವಲ ಒಂದು ಗಂಟೆ ಸಮಯವನ್ನು ಮೀಸಲಿಟ್ಟು, ಯೋಗ, ಪ್ರಾಣಾಯಾಮ, ಧ್ಯಾನ ಮತ್ತು ಸರಿಯಾದ ಆಹಾರವನ್ನು ಸೇವಿಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಇದನ್ನು ನಿರ್ಲಕ್ಷಿಸಿದರೆ, ಶರೀರವನ್ನು ವಾಪಸು ಸರಿಪಡಿಸಲು ಬಹಳ ಸಮಯ, ಶ್ರಮ ಮತ್ತು ಹಣ ಬೇಕಾಗುತ್ತದೆ.

ನಾವು ನೋಡುತ್ತಿರುವಂತೆ, ಅನೇಕರು ಹೃದಯ ಸಮಸ್ಯೆ, ಲಿವರ್ ಸಂಬಂಧಿತ ಕಾಯಿಲೆ, ಬೆನ್ನು ನೋವು, ಕಾಲು ನೋವು ಇತ್ಯಾದಿ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅಂಥಾ ಸ್ಥಿತಿ ಉಂಟಾದಾಗ ಮಾತ್ರ ದೇಹದ ಮಹತ್ವ ಅರಿವಿಗೆ ಬರುತ್ತದೆ. ಆದರೆ ಆಗಲೇ ಸಮಯ ಕೈಮೂಟೆಯೊಳಗೆ ಮಾರಿ ಹೋಗಿರುತ್ತದೆ. ಹಾಗಾಗಿಯೇ, ಮುಂಚಿನಿಂದಲೇ ಎಚ್ಚೆತ್ತುಕೊಳ್ಳುವುದು ಒಳ್ಳೆಯದು.

## ಸಾಧನೆಗೆ ದೇಹವೇ ಪೂರಕ

ಇತಿಹಾಸದಲ್ಲಿ ದೊಡ್ಡ ದೊಡ್ಡ ಸಾಧನೆಗಳನ್ನು ಮಾಡಿದ ಮಹಾನ್ ವ್ಯಕ್ತಿಗಳು ತಮ್ಮ ದೇಹವನ್ನು ಸದೃಢವಾಗಿಟ್ಟುಕೊಂಡದ್ದರಿಂದಲೇ ಯಶಸ್ಸು ಕಂಡಿದ್ದಾರೆ. ಥಾಮಸ್ ಆಲ್ವಾ ಎಡಿಸನ್ ವಿದ್ಯುತ್ ಬಲ್ಬ್ ಕಂಡುಹಿಡಿಯಲು, ತೇನ್ ಸಿಂಗ್ ಮೌಂಟ್ ಎವರೆಸ್ಟ್ ಏರಲು, ಸರ್ ಎಂ. ವಿಶ್ವೇಶ್ವರಯ್ಯ ಮಹಾನ್ ಯೋಜನೆಗಳನ್ನು ರೂಪಿಸಲು, ಸುನೀತಾ ವಿಲಿಯಮ್ಸ್ ಬಾಹ್ಯಾಕಾಶ ಪ್ರಯಾಣ ಮಾಡಲು, ಹುಸೇನ್ ಬೋಲ್ಟ್ ಓಟದಲ್ಲಿ ಚಿನ್ನ ಗೆಲ್ಲಲು ಇವರ ದೇಹ ಅವರ ಸಾಧನೆಗೆ ಸಹಕರಿಸಿತು.

ನಾವು ನಮ್ಮ ದೇಹವನ್ನು ನಿರ್ಲಕ್ಷಿಸಿದರೆ, ಸಮಾಜ ನಮ್ಮನ್ನು ಅಷ್ಟು ಪ್ರೀತಿಸೋದಿಲ್ಲ. ಅನಾರೋಗ್ಯದಿಂದ ಬಳಲುತ್ತಿರುವ ವ್ಯಕ್ತಿಯು ಆರ್ಥಿಕ ಮತ್ತು ಮಾನಸಿಕ ಹಿಂಸೆಗೆ ಒಳಗಾಗುತ್ತಾರೆ. ಅದಕ್ಕಿಂತ ಮುಂಚೆ, ದೇಹವನ್ನು ಆರೋಗ್ಯವಾಗಿಟ್ಟುಕೊಂಡು, ಸದೃಢ ಜೀವನ ನಡೆಸೋಣ.

ದೇಹವೇ ನಮ್ಮ ನಿಜವಾದ ಸಂಪತ್ತು. ಅದನ್ನು ಶ್ರದ್ಧೆಯಿಂದ ಕಾಪಾಡೋಣ!

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248